**ದಿನಾಂಕ: 16-01-2021 ರಂದು ಬೆಳಗ್ಗೆ 10:00 ಗಂಟೆಗೆ ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ನಾಗರಾಜ. ಸಿ. ಎಸ್ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 166 ಕರೀಸಂದ್ರ)
3. ಶ್ರೀ. ಶ್ರೀನಿವಾಸ್ – ಕಂದಾಯ ಪರಿವೀಕ್ಷಕರು (ವಾರ್ಡ್ 166 ಕರೀಸಂದ್ರ)
4. ಶ್ರೀ. ನರಸಿಂಹಲು – ಹಿ.ಆ.ಪ– (ವಾರ್ಡ್ 166 ಕರೀಸಂದ್ರ)
5. ಶ್ರೀ. ಕಾರ್ತಿಕ್ – ಕಿ.ಆ.ಪ (ಹೊರಗುತ್ತಿಗೆ ಆಧಾರದ ಮೇಲೆ) (ವಾರ್ಡ್ 166 ಕರೀಸಂದ್ರ)
6. ಪೊಲೀಸ್ ಇಲಾಖೆ – ಸಬ್ ಇನ್ಸ್‌ಪೆಕ್ಟರ್ ಮತ್ತು ಅಸಿಸ್ಟೆಂಟ್ ಸಬ್ ಇನ್ಸ್‌ಪೆಕ್ಟರ್ ಜಯನಗರ ಲಾ ಅಂಡ್ ಆರ್ಡರ್

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 166 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ಕಳೆದ 15 ದಿನಗಳಿಂದ ಸ್ವೀಕೃತವಾಗಿರುವ ಅಂತರ್ಜಾಲ ದೂರುಗಳು, ಲಿಖಿತ ದೂರುಗಳು ಹಾಗೂ ಸಾರ್ವಜನಿಕರ ಮೌಖಿಕ ದೂರುಗಳು ಹಾಗೂ ಇನ್ನಿತರೆ ಸ್ಥಳೀಯ ಸಂಸ್ಥೆಗಳಿಂದ ದೂರುಗಳನ್ನು ಕಾಲಕಾಲಕ್ಕೆ ಪರಿಹಾರ ಮಾಡಲಾಗಿರುವ ಬಗ್ಗೆ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಿಗೆ ವಿವರಿಸಲಾಯಿತು.

ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ಕಂಡುಬಂದಿರುವ ಕೋವಿಡ್–19 ರೋಗಿಗಳ ವಿವರಗಳನ್ನು ವಾರ್ಡ್‌ನ ಹಿರಿಯ ಆರೋಗ್ಯ ಪರಿವೀಕ್ಷಕರಿಂದ ಕಳೆದ ನಾಲ್ಕು ತಿಂಗಳಿನ ಟೆಸ್ಟಿಂಗ್ ಮಾಹಿತಿಯನ್ನು ನೀಡಲು ಅಧ್ಯಕ್ಷರು ಸೂಚಿಸಿದರು. ಸದರಿ ರೋಗದ ಹರಡುವಿಕೆಯನ್ನು ತಡೆಗಟ್ಟುವ ಸಂಬಂಧ ಕೈಗೊಳ್ಳಾಲಾಗುತ್ತಿರುವ ಕ್ರಮಗಳ ಕುರಿತು ಚರ್ಚಿಸಿದಂತೆ ಕೋವಿಡ್–19 ಟೆಸ್ಟಿಂಗ್ ಕಾರ್ಯವನ್ನು ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚುವರಿಯಾಗಿ ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ.

ಜಯನಗರ 7 ಮತ್ತು 8ನೇ ಬ್ಲಾಕ್‌ನ ನಾಗರೀಕರ ವೇದಿಕೆ ವತಿಯಿಂದ ಶ್ರೀ. ಚೇತನ್ ರವರು ದೂರವಾಣಿ ಮುಖಾಂತರ ಮಾತನಾಡುತ್ತಾ ದೀಪಕ್ ಹಾಸ್ಪಿಟಲ್ ರಸ್ತೆಯ ಫುಟ್‌ಬಾತ್‌ನ್ನು ಸಣ್ಣ ಸಣ್ಣ ವ್ಯಾಪಾರಿಗಳು ಅಂದರೆ ಕ್ಯಾಂಟೀನ್, ಹಾಲಿನ ಭೂತ್, ಜ್ಯೂಸ್ ಸೆಂಟರ್ ಇಟ್ಟಿರುವುದರಿಂದ ರಸ್ತೆಯಲ್ಲಿ ಸಾರ್ವಜನಿಕರು ವಾಹನಗಳನ್ನು ಪಾರ್ಕಿಗ್ ಮಾಡುತ್ತಿರುತ್ತಾರೆ ಹಾಗೂ ರಜತಾದ್ರಿ ಹೋಟೆಲ್, ಅಡಿಗಾಸ್ ಹೋಟೆಲ್ ಮತ್ತು ಪೋಸ್ಟ್ ಆಫೀಸ್ ಹತ್ತಿರ ರಸ್ತೆಗಳಲ್ಲಿ ವಾಹನಗನ್ನು ಪಾರ್ಕಿಂಗ್ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಆದುದ್ದರಿಂದ ಈ ರಸ್ತೆಗಳಲ್ಲಿ ವಾರಕ್ಕೊಮ್ಮೆ ಒಂದು ಬದಿಗೆ ಪಾರ್ಕಿಂಗ್ ವ್ಯವಸ್ಥೆ ಮಾಡಲು ಕೋರಿರುತ್ತಾರೆ. ಕರೀಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿಲ್ಲಿಸಿರುವ ವಾಹನಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರು ರವರು ಮಾತನಾಡಿ ಸಂಚಾರ ಪೋಲಿಸ್ ಠಾಣೆ, ಬನಶಂಕರಿ/ಜಯನಗರ ಪೋಲೀಸ್ ಇಲಾಖೆಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

ವಾರ್ಡ್ ಕಛೇರಿಯ ಪಕ್ಕದ ರಸ್ತೆಯ ಎರಡು ಬದಿಯಲ್ಲಿ ಕಸದ ಟಿಪ್ಪರ್ ಆಟೋಗಳನ್ನು ಪಾರ್ಕಿಂಗ್ ಮಾಡುತ್ತಿರುವುದರಿಂದ ನಾಗರೀಕರಿಗೆ ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ ಅವುಗಳನ್ನು ತೆರವುಗೊಳಿಸಲು ಕೋರಿರುತ್ತಾರೆ. ಇದನ್ನು ಬಗೆಹರಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯನಿರ್ವಹಣೆ) ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸುತ್ತಾ ದೀಪಕ್ ಹಾಸ್ಪಿಟಲ್ ಹತ್ತಿರ ಇರುವ ಕ್ಯಾಂಟೀನ್‌ನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ಜಯನಗರ 7ನೇ ಬ್ಲಾಕ್‌ನ 6ನೇ ಮತ್ತು 11ನೇ ಅಡ್ಡರಸ್ತೆಗಳಿಗೆ ಕೂಡಲೇ ಒಳಚರಂಡಿ ಪೈಪ್‌ಲೈನ್ ಅಳವಡಿಸಿ ಡಾಂಬರೀಕರಣ ಮಾಡಿಕೊಡಲು ಕೋರಿರುತ್ತಾರೆ.

ಪೊಲೀಸ್ ಇಲಾಖೆ (ಜಯನಗರ) ಸಬ್ ಇನ್ಸ್‌ಪೆಕ್ಟರ್ ರವರು ಮತ್ತು ಸಂಘ ಸಂಸ್ಥೆ ರವರು ಕೆ.ಆರ್. ರಸ್ತೆ, ಪೈ ಹೋಟೆಲ್ ಹತ್ತಿರ ಹಾಗೂ ಸೇವಾಕ್ಷೇತ್ರ ಆಸ್ಪತ್ರೆ ಹತ್ತಿರ ರಸ್ತೆಯ ಬೀದಿ ದೀಪಗಳು ಇದ್ದು ಅಕ್ಕ ಪಕ್ಕದ ಮರದ ರೆಂಬೆಗಳಿಂದ ಬೀದಿ ದೀಪಗಳ ಬೆಳಕು ರಸ್ತೆಗೆ ಬೀಳದಿರುವುದರಿಂದ ಕಳ್ಳತನಗಳು, ರಾಬರಿಗಳು ನಡೆಯುತ್ತಿರುತ್ತದೆ. ಆದುದ್ದರಿಂದ ಸದರಿ ಸ್ಥಳಗಳಲ್ಲಿ ಸಾಕಷ್ಟು ಬೀದಿ ದೀಪಗಳಿಂದ ಬೆಳಕು ಬರುವಂತೆ ಕ್ರಮವಹಿಸಲು ಕೋರಿರುತ್ತಾರೆ. ಬಿಬಿಎಂಪಿ ಅರಣ್ಯ ಇಲಾಖೆಯ ಜೊತೆ ಅಧ್ಯಕ್ಷರು ರವರು ಮಾತನಾಡಿ ಮರದ ರೆಂಬೆಗಳನ್ನು ಕತ್ತರಿಸಿ ರಸ್ತೆಗೆ ಬೆಳಕು ಬರುವಂತೆ ಕ್ರಮವಹಿಸಲು ಸೂಚಿಸಿರುತ್ತಾರೆ.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

CSM AE 16/01/21

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 166